## 8. ಸಮಾಜ ಕಲ್ಯಾಣ ಇಲಾಖೆಯ ಒಂಭತ್ತು ಸೇವೆ ಸಕಾಲ ವ್ಯಾಪ್ತಿಗೆ

ಸಮಾಜ ಕಲ್ಯಾಣ ಇಲಾಖೆಯ 9 ಪ್ರಮುಖ ಯೋಜನೆಗಳ ಸೇವೆ ಕಾಲಮಿತಿಯೊಳಗೆ ಅರ್ಹ ಫಲಾನುಭವಿಗಳಿಗೆ ತಲುಪಿಸುವ ಉದ್ದೇಶದಿಂದ ಸಕಾಲ ವ್ಯಾಪ್ತಿಗೆ ತರಲು ತೀರ್ಮಾನಿಸಲಾಗಿದೆ ಎಂದು ಸಮಾಜ ಕಲ್ಯಾಣ ಸಚಿವರು ಆಗಿರುವ ಉಪ ಮುಖ್ಯಮಂತ್ರಿ ಗೋವಿಂದ ಕಾರಜೋಳ ತಿಳಿಸಿದ್ದಾರೆ. ವಿಕಾಸಸೌಧದಲ್ಲಿ ನಡೆದ ರಾಜ್ಯ ಪರಿಷತ್ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಅಂತರ್ಜಾತಿ ವಿವಾಹಿತ ದಂಪತಿಗಳಿಗೆ ಪ್ರೋತ್ಸಾಹಧನ, ದೌರ್ಜನ್ಯ ಸಂತ್ರಸ್ತರಿಗೆ ಪರಿಹಾರ, ಯುಪಿಎಸ್‌ಸಿ, ಕೆಎಎಸ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷಾಪೂರ್ವ ತರಬೇತಿ, ಸಾಗರೋತ್ತರ ವಿದ್ಯಾರ್ಥಿ ವೇತನ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ, ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಹಾಗೂ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಯೋಜನೆಗಳ ಸೇವೆ ಸಕಾಲ ವ್ಯಾಪ್ತಿಗೆ ಒಳಪಡಿಸಲಾಗಿದೆ ಎಂದರು. ಎಸ್‌ಟಿಪಿ ಮತ್ತು ಟಿಎಸ್‌ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯದವರಿಗೆ ಉದ್ಯೋಗ ಕಲ್ಪಿಸುವ ಯೋಜನೆಗಳನ್ನು ರೂಪಿಸುವಂತೆ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು. ಕೊರೋನಾ ಹಿನ್ನೆಲೆಯಲ್ಲಿ ವಲಸೆ ಕಾರ್ಮಿಕರು ಹಳ್ಳಿಗಳಿಗೆ ಹಿಂತಿರುಗಿದ್ದು, ನರೇಗಾ ಯೋಜನೆಯಡಿ ಎಲ್ಲರಿಗೂ ಜಾಬ್‌ಕಾರ್ಡ್ ನೀಡಿ ಕೆಲಸ ಒದಗಿಸಬೇಕು. ಎಸ್‌ಸಿ–ಎಸ್‌ಟಿ ಕಾರ್ಮಿಕರಿಗೆ ಕಡ್ಡಾಯವಾಗಿ 100 ದಿನ ಉದ್ಯೋಗ ನೀಡಿ, ಅವರ ಕೃಷಿ ಭೂಮಿಯಲ್ಲಿ ಕೆಲಸ ಮಾಡಲು ಅವಕಾಶ ಕಲ್ಪಿಸಬೇಕು. 65 ಲಕ್ಷ ಜಾಬ್ ಕಾರ್ಡ್ ಪಡೆದವರಲ್ಲಿ ಎಸ್‌ಸಿ–ಎಸ್‌ಟಿ ಸಮುದಾಯ ಇದೆ. ಗ್ರಾಮೀಣ ಭಾಗದ ಎಲ್ಲ ಕುಟುಂಬಗಳಿಗೂ ಉದ್ಯೋಗ ನೀಡಬೇಕು ಎಂದು ನಿರ್ದೇಶನ ನೀಡಲಾಗಿದೆ. ಕೆಎಂಎಫ್ ಹಾಲು ಉತ್ಪಾದಕರ ಸಂಘಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಎಸ್‌ಸಿ–ಎಸ್‌ಟಿ ಸಮುದಾಯದವರಿಗೆ ಸದಸ್ಯತ್ವ ನೀಡಬೇಕು. ಹಾಲು ಉತ್ಪಾದನೆ ಉತ್ತೇಜಿಸಲು ಕರು, ಹಸು, ಎಮ್ಮೆ ಸಾಲ ಹಾಗೂ ಸಹಾಯಧನ ರೂಪದಲ್ಲಿ ಒದಗಿಸಬೇಕು. ಕೆಎಂಎಫ್ ಮಳಿಗೆ ಸಹ ಎಸ್‌ಸಿ–ಎಸ್‌ಟಿ ಸಮುದಾಯಕ್ಕೆ ಹಂಚಿಕೆ ಮಾಡಬೇಕು. ಉತ್ತರ ಕರ್ನಾಟಕ ಭಾಗದಲ್ಲಿ ಹೆಚ್ಚಾಗಿ ಹಾಲು ಉತ್ಪಾದಕರ ಸಂಘ ಸ್ಥಾಪಿಸಲು ಮುಂದಾಗುವಂತೆಯೂ ಸಂಬಂಧಪಟ್ಟ ಇಲಾಖೆಗೆ ತಿಳಿಸಲಾಗಿದೆ ಎಂದರು. ಕೊರೋನಾದಿಂದ ಶಾಲೆಗಳು ಪ್ರಾರಂಭವಾಗದ ಹಿನ್ನೆಲೆಯಲ್ಲಿ ಎಸ್‌ಸಿ–ಎಸ್‌ಟಿ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ಯೋಜನೆಯಡಿ ಆಹಾರ ಧಾನ್ಯವನ್ನು ಮನೆಗೆ ಸರಬರಾಜು ಮಾಡಿ, ಪಠ್ಯ ಪುಸ್ತಕ ವಿತರಿಸುವಂತೆ ಸೂಚಿಸಲಾಗಿದೆ ಎಂದು ವಿವರಿಸಿದರು. ಸಮಾಜ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿ ಕುಮಾರ್ ನಾಯಕ್, ಆಯುಕ್ತ ರವಿಕುಮಾರ್ ಸುರಪುರ್, ಇ.ವೆಂಕಟಯ್ಯ ಉಪಸ್ಥಿತರಿದ್ದರು.

ಆಧಾರ:ಉದಯವಾಣಿ, ದಿನಾಂಕ:08.07.2020